ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2018–19** **ದಿನಾಂಕ: 05–02–2019**

## ಪತ್ರಿಕಾ ಆಮಂತ್ರಣ

1. 15 ನೇ ವಿಧಾನಸಭೆಯ ಎರಡನೇ ಅಧಿವೇಶನ:

ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲ ವಜುಭಾಯಿ ವಾಲಾ ಅವರಿಂದ ಭಾಷಣ

ದಿನಾಂಕ: 06–02–2019, ಬುಧವಾರ, ಸಮಯ : ಬೆಳಿಗ್ಗೆ 11–00 ಗಂಟೆಗೆ

ಸ್ಥಳ: ವಿಧಾನಸಭೆಯ ಸಭಾಂಗಣ, ವಿಧಾನಸೌಧ, ಬೆಂಗಳೂರು;

ಪತ್ರಿಕಾ ಪ್ರಕಟಣೆ

# ವಿದ್ಯಾರ್ಥಿ ವೇತನ : ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಬೆಂಗಳೂರು, ಫೆಬ್ರವರಿ 5, 2019 (ಕರ್ನಾಟಕ ವಾರ್ತೆ)

ಪರಿಶಿಷ್ಟ ವರ್ಗದ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ 2018–19 ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಲು ಅವಕಾಶವನ್ನು ಈ ಹಿಂದೆ ದಿನಾಂಕ: 20–01–2019 ರವರೆಗೆ ಕೊನೆಯ ದಿನಾಂಕವನ್ನು ನಿಗಧಿಪಡಿಸಲಾಗಿದ್ದು ಇದೀಗ 10–02–2019 ರವರೆಗೆ ವಿಸ್ತರಿಸಲಾಗಿದೆ.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಿಸುವಂತೆ ರಾಯಚೂರು, ಬೀದರ್, ಚಿತ್ರದುರ್ಗ, ದಾವಣಗೆರೆ, ಬೆಂಗಳೂರು ನಗರ ಮತ್ತು ಮೈಸೂರು ಜಿಲ್ಲೆಗಳಿಂದ ಕೋರಿಕೆ ಸಲ್ಲಿಕೆಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸದರಿ ಯೋಜನೆಯಡಿ ಸೌಲಭ್ಯವನ್ನು ಪಡೆಯಲು ವೆಬ್‌ಸೈಟ್ ವಿಳಾಸ: https://scholarships.gov.in ನಲ್ಲಿ ಅರ್ಜಿ ಸಲ್ಲಿಸಲು ಅವಕಾಶವನ್ನು 10–02–2019 ರವರೆಗೆ ವಿಸ್ತರಿಸಲಾಗಿದ್ದು, ಪರಿಶಿಷ್ಟ ಪಂಗಡದ ಅರ್ಹ ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ: 0120–619540, 080 22261789 ಹಾಗೂ 080 – 22634300 ಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಅರ್ಹತಾ ಪಟ್ಟಿ ಪ್ರಕಟ

ಬೆಂಗಳೂರು, ಫೆಬ್ರವರಿ 5, 2019 (ಕರ್ನಾಟಕ ವಾರ್ತೆ)–

ಕರ್ನಾಟಕ ಲೋಕಸೇವಾ ಆಯೋಗ ದಿನಾಂಕ 15––03–2017 ಅಧಿಸೂಚನೆ ಹಾಗೂ 15–04–2017ರ ಸೇರ್ಪಡೆ ಅಧಿಸೂಚನೆಯನ್ವಯ ವಿವಿಧ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಮೂಲ ದಾಖಲೆಗಳ ಪರಿಶೀಲನೆ ಕಾರ್ಯವನ್ನು ದಿನಾಂಕ: 18–02–2019 ರಿಂದ 27–02–2019 ರವರೆಗೆ ನಿಗದಿಪಡಿಸಿದೆ. ಈ ಬಗ್ಗೆ ಆಯೋಗದ ಜಾಲತಾಣ http://kpsc.kar.nic.in ನಲ್ಲಿ ಈಗಾಗಲೇ ಅರ್ಹತಾ ಪಟ್ಟಿಗಳನ್ನು ಪ್ರಕಟಿಸಲಾಗಿದ್ದು, ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನು ರವಾನಿಸಿದೆ.

ಸೂಚನಾ ಪತ್ರ ತಲುಪದಿರುವ ಅಭ್ಯರ್ಥಿಗಳು ಆಯೋಗದ ಜಾಲತಾಣದಲ್ಲಿ ಪ್ರಕಟಿಸಿರುವ ಅರ್ಹತಾ ಪಟ್ಟಿಯ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು, ಸೂಚನಾ ಪತ್ರ/ಅರ್ಹತಾ ಪಟ್ಟಿಯ ಡೌನ್‌ಲೋಡ್ ಪ್ರತಿ ಮತ್ತು ಅಗತ್ಯ ಮೂಲ ದಾಖಲೆಗಳೊಂದಿಗೆ ನಿಗದಿತ ದಿನಾಂಕದಂದು ಕೇಂದ್ರ ಕಚೇರಿ, ಉದ್ಯೋಗ ಸೌಧ, ಬೆಂಗಳೂರು ಇಲ್ಲಿ ಹಾಜರಾಗಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

# "Sadak Suraksha-Jeevan Raksha"

Bengaluru, February (Karnataka Information)

The Central Government has decided to observe the 30th National Road Safety Week from 04-02-2019 to 10-02-2019 with the theme of "Sadak Suraksha – Jeevan Raksha". As per the directions, the concerned authorities are taking up various road safety activities throughout the State during the said period.

Hence, all the owners/drivers of the vehicles are hereby informed to keep their vehicles in good condition and follow the Road Safety regulation for safe driving of motor vechicles in order to save lives and extend co-operation for successfully conducting 30th Road Safety Week says press release from commissioner for Transport and Road Safety